250 (08) : ಶ್ರೀ ಜಯಪ್ರಕಾಶ್ ಹೆಗ್ಡೆ.ಕೆ. (ಬ್ರಹ್ಮಾವರ) ಮಾನ್ಯ ಜಲ ಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬ್ರಹ್ಮಾವರ ವಿಧಾನ ಸಭಾ ಕ್ಷೇತ್ರದಲ್ಲಿ ಕೆರೆಗಳಲ್ಲಿ ಹೂಳೆತ್ತುವ ಕಾರ್ಯ ಯೋಜನೆಯಲ್ಲಿ ಎಷ್ಟು ಕೆರೆಗಳನ್ನು ಗುರುತಿಸಲಾಗಿದೆ;

ಆ) ಈ ಯೋಜನೆಯಡಿ ಇದುವರೆವಿಗೆ ನೀಡಿರುವ ಅನುದಾನ ಎಷ್ಟು;

ಇ) ಈ ಯೋಜನೆಯಡಿಯಲ್ಲಿ ಈ ವರ್ಷ ಆಗಿರುವ ಪ್ರಗತಿಯ ವಿವರಗಳೇನು?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲ ಸಂಪನ್ಮೂಲ ಮತ್ತು ಸಾರಿಗೆ)

ಅ) ಮತ್ತು ಆ) 2003–04ನೇ ಸಾಲಿನಲ್ಲಿ ಬ್ರಹ್ಮಾವರ ವಿಧಾನ ಸಭಾ ಕ್ಷೇತ್ರದ ಚಾಂತಾರು ಮದಗ ಕೆರೆಯನ್ನು ಗುರುತಿಸಿ, ರೈತ ಕಾಯಕ ಕೆರೆ ಯೋಜನೆಯಡಿ ಕೈಗೊಂಡು ಈ ಕೆರೆಯಂಗಳದಲ್ಲಿ 19,400 ಘ.ಮೀ. ನಷ್ಟು ಹೂಳನ್ನು 8.72 ಲಕ್ಷ ರೂ.ಗಳ ವೆಚ್ಚದಲ್ಲಿ ತೆಗೆಯಲಾಗಿದೆ.

ಇ) ಈ ವರ್ಷ ಹೂಳೆತ್ತುವ ಕಾರ್ಯ ಕೈಗೆತ್ತಿಕೊಂಡಿಲ್ಲ.

252 (10) : ಶ್ರೀ ಜಯಪ್ರಕಾಶ್ ಹೆಗ್ಡೆ ಕೆ. ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಮೀನುಗಾರಿಕೆ ರಸ್ತೆ ಅಭಿವೃದ್ಧಿಗಾಗಿ ಎಷ್ಟು ಅನುದಾನವನ್ನು ಪ್ರಸ್ತುತ ಸಾಲಿನಲ್ಲಿ ನಿಗದಿ ಮಾಡಲಾಗಿದೆ; ಹಾಗೂ ಇದಕ್ಕಾಗಿ ನೀಡಿರುವ ಅನುದಾನ ಎಷ್ಟು;

ಆ) ಬ್ರಹ್ಮಾವರ ವಿಧಾನಸಭಾ ಕ್ಷೇತ್ರದಲ್ಲಿ ಇಂತಹ ಎಷ್ಟು ಮೀನುಗಾರಿಕೆ ರಸ್ತೆಗಳ ಅಭಿವೃದ್ಧಿಯನ್ನು ಕೈಗೆತ್ತಿಕೊಳ್ಳಲಾಗಿದೆ;

ಇ) ಈ ನಿಟ್ಟಿನಲ್ಲಿ ಇದುವರೆಗೆ ಆಗಿರುವ ಪ್ರಗತಿಯ ವಿವರಗಳೇನು?

ಶ್ರೀ. ಎನ್. ಧರ್ಮಸಿಂಗ್ (ಮುಖ್ಯಮಂತ್ರಿಗಳು)

ಅ) ಮೀನುಗಾರಿಕೆ ರಸ್ತೆ ಅಭಿವೃದ್ಧಿಗಾಗಿ ಪ್ರಸ್ತುತ ಸಾಲಿನಲ್ಲಿ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆ ಸೇರಿ ಒಟ್ಟು ರೂ. 5.50 ಲಕ್ಷ ಅನುದಾನವನ್ನು ಒದಗಿಸಲಾಗಿದೆ.

ಆ) ಅನುದಾನದ ಕೊರತೆಯಿಂದಾಗಿ ಪ್ರಸ್ತುತ ಸಾಲಿನಲ್ಲಿ ಬ್ರಹ್ಮಾವರ ವಿಧಾನಸಭಾ ಕ್ಷೇತ್ರದಲ್ಲಿ ಯಾವುದೇ ಮೀನುಗಾರಿಕೆ ರಸ್ತೆಗಳ ಅಭಿವೃದ್ಧಿಯನ್ನು ಕೈಗೆತ್ತಿಕೊಂಡಿರುವುದಿಲ್ಲ.

ಇ) ಈ ವಿಷಯವು ಆರ್ಥಿಕ ಇಲಾಖೆಯೊಡನೆ ಸಮಾಲೋಚನೆಯಲ್ಲಿದೆ.

253 (11) : ಶ್ರೀ ಜಯಪ್ರಕಾಶ್ ಹೆಗ್ಡೆ ಕೆ. (ಬ್ರಹ್ಮಾವರ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಂಗಳೂರು (ನಗರ) ಜಿಲ್ಲೆಯಲ್ಲಿನ ಕೆರೆಗಳ ಮೀನು ಪಾಶುವಾರು ಹಕ್ಕನ್ನು ಮೀನುಗಾರಿಕೆ ಇಲಾಖೆಯಿಂದ ಹಿಂದಕ್ಕೆ ಪಡೆದು ಕೆರೆ ಅಭಿವೃದ್ಧಿ ಪ್ರಾಧಿಕಾರದ ಮೂಲಕ ಖಾಸಗಿ ಕಂಪನಿಗಳಿಗೆ ನೀಡುವಂತಹ ಪ್ರಸ್ತಾಪ ಸರ್ಕಾರದ ಮುಂದಿದೆಯೇ;